# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 121 (127) |
| ವಿಧಾನ ಪರಿಷತ್ತಿನ ಸದಸ್ಯರು | : | ಶ್ರೀ ಕುಶಾಲಪ್ಪ ಎಂ.ಪಿ (ಸುಜಾ)<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 05.12.2023 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕೊಡಗು ಜಿಲ್ಲೆಯ ಮಡಿಕೇರಿ ಮತ್ತು ವಿರಾಜಪೇಟೆ ವಿಧಾನಸಭಾ ಕ್ಷೇತ್ರಗಳಿಗೆ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯಿಂದ ಯಾವುದಾದರೂ ಹೊಸ ಕಾರ್ಖಾನೆ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ಸರ್ಕಾರದಿಂದ ಕೈಗಾರಿಕೆಗಳನ್ನು ನೇರವಾಗಿ ಸ್ಥಾಪಿಸುವುದಿಲ್ಲ.<br><br>ಆದಾಗ್ಯೂ, ಕೈಗಾರಿಕೆಗಳನ್ನು ಸ್ಥಾಪಿಸಲು ಆಸಕ್ತಿ ವಹಿಸುವ ಕೈಗಾರಿಕೋದ್ಯಮಿಗಳಿಗೆ ಇಲಾಖೆಯಿಂದ ಅಗತ್ಯ ಬೆಂಬಲ ಸೇವೆ ಒದಗಿಸಲಾಗುತ್ತದೆ.<br><br>ಅದರಂತೆ, ಕೊಡಗು ಜಿಲ್ಲೆಯಲ್ಲಿ ಒಟ್ಟು 9 ಬೃಹತ್ ಮತ್ತು ಮೆಗಾ ಖಾಸಗಿ ಕೈಗಾರಿಕೆಗಳಿಗೆ ಕಳೆದ 10 ವರ್ಷಗಳಲ್ಲಿ ಅನುಮೋದನೆ ನೀಡಲಾಗಿದೆ. ಈ ಯೋಜನೆಗಳಿಂದ ಒಟ್ಟು ರೂ. 575 ಕೋಟಿ ಬಂಡವಾಳ ಹೂಡಿಕೆಯಾಗಲಿದ್ದು, 1333 ಉದ್ಯೋಗ ಸೃಷ್ಟಿಯಾಗಲಿದೆ. |
| ಆ | ಹಾಗಿದ್ದಲ್ಲಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ವತಿಯಿಂದ ಈ ಜಿಲ್ಲೆಗಳಿಗೆ ಹೊಸದಾಗಿ ಯೋಜನೆ ರೂಪಿಸಲಾಗುವುದೇ? | ಕೊಡಗು ಜಿಲ್ಲೆಯ ಮಡಿಕೇರಿ ಮತ್ತು ವಿರಾಜಪೇಟೆ ವಿಧಾನಸಭಾ ಕ್ಷೇತ್ರವು ಕೈಗಾರಿಕಾ ನೀತಿ 2020-25 ರನ್ವಯ ವಲಯ-1ರ ವ್ಯಾಪ್ತಿಯಲ್ಲಿದ್ದು, ಜಿಲ್ಲೆಯಲ್ಲಿ ಹೊಸದಾಗಿ ಖಾಸಗಿ ಕೈಗಾರಿಕೆಗಳನ್ನು ಪ್ರಾರಂಭಿಸಲು ಆಸಕ್ತಿ ವಹಿಸುವ ಕೈಗಾರಿಕೋದ್ಯಮಿಗಳಿಗೆ 2020-25ರ ಕೈಗಾರಿಕಾ ನೀತಿಯಂತೆ ಈ ಕೆಳಕಂಡ ಪ್ರೋತ್ಸಾಹ ಮತ್ತು ಉತ್ತೇಜನಗಳನ್ನು ಒದಗಿಸಲಾಗುತ್ತದೆ.<br><br>1. ಬಂಡವಾಳ ಹೂಡಿಕೆ ಸಹಾಯಧನ/ ವಹಿವಾಟು ಆಧಾರಿತ ಸಹಾಯಧನ<br>2. ಮುದ್ರಾಂಕ ಶುಲ್ಕ ವಿನಾಯಿತಿ ಮತ್ತು ನೋಂದಣಿ ಶುಲ್ಕದಲ್ಲಿ ರಿಯಾಯಿತಿ<br>3. ಭೂ ಪರಿವರ್ತನೆ ಶುಲ್ಕದ ಮರುಪಾವತಿ<br>4. ತ್ಯಾಜ್ಯ ಸಂಸ್ಕರಣಾ ಘಟಕ ಸ್ಥಾಪಿಸಲು ಸಹಾಯಧನ (ಇಟಿಪಿ)<br>5. ತಂತ್ರಜ್ಞಾನ ಅಳವಡಿಕೆ ಹಾಗೂ ನವೋನ್ವೇಶಣೆಗೆ ಉತ್ತೇಜನ<br>6. ವಿದ್ಯುತ್ ಶುಲ್ಕದ ಮೇಲಿನ ತೆರಿಗೆ ವಿನಾಯಿತಿ<br>7. ವಿದ್ಯುಚ್ಛಕ್ತಿ ಸಹಾಯಧನ<br>8. ಆಂಕರ್ ಘಟಕ ಸಹಾಯಧನ |

ಸಿಐ 311 ಎಸ್‌ಪಿಐ 2023

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು